ಅ) ಜಮೀನು ಕಳೆದುಕೊಂಡ ರೈತರುಗಳಿಗೆ ಪರಿಹಾರ ಒದಗಿಸುವ ಬಗ್ಗೆ ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ಪ್ರಸ್ತಾವನೆ ಕಳುಹಿಸಿದ್ದು, ನೋಟೀಫೀಕೇಷನ್ ಆದ ನಂತರ ಕ್ರಮ ಕೈಗೊಳ್ಳಲಾಗುವುದು, ಹಾಗೂ ರೂ.6.00 ಲಕ್ಷಗಳ ಬೆಳೆ ನಷ್ಟ ಪರಿಹಾರ ಹಣವನ್ನು ನೀಡಲಾಗಿದೆ.

ಇ) ದೋದ್ದನಕಟ್ಟೆ ಕಾಲುವೆ ದುರಸ್ಥಿ ಕೈಗೊಳ್ಳಲು ರೂ.16 ಲಕ್ಷಗಳಿಗೆ ಅಂದಾಜು ಪಟ್ಟಿ ತಯಾರಿಸಲಾಗಿದೆ. ಅಂದಾಜು ಪಟ್ಟಿ ಪರಿಶೀಲನೆಯಲ್ಲಿದೆ. ಅಂದಾಜಿನಂತೆ ತೂಬುಗಳ ದುರಸ್ತಿ ಅಡ್ಡಮೋರಿ ಇತ್ಯಾದಿ ಕಾಮಗಾರಿಗಳಿರುತ್ತದೆ.

ಕೆ.ಆರ್.ಪೇಟೆ ಕ್ಷೇತ್ರ ಮಂದಗೆರೆ ಬೈಪಾಸ್ ಕಾಲುವೆ ನಿರ್ಮಾಣ

1379 (1682) ಶ್ರೀ ಚಂದ್ರಶೇಖರ್ ಕೆ.ಬಿ. (ಕೆ.ಆರ್.ಪೇಟೆ): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷ್ಣರಾಜ ಪೇಟೆ ಕ್ಷೇತ್ರದ ಅಕ್ಕಿಹೆಬ್ಬಾಳು ಹೋಬಳಿ ಮಂದಗೆರೆ ಬೈಪಾಸ್ ಕಾಲುವೆ ಕಾಮಗಾರಿಗೆ 2001-02ರಲ್ಲಿ ರೂ.50.00 ಲಕ್ಷ ಮಂಜೂರಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಕಾಮಗಾರಿ ಪ್ರಾರಂಭವಾಗದಿರಲು ಕಾರಣವೇನು;

ಇ) ಕಾಮಗಾರಿಯನ್ನು ಎಂದು ಪ್ರಾರಂಭಿಸಲಾಗುವುದು?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು):

ಅ) ಮಂದಗೆರೆ ಸಂಪರ್ಕ ಕಾಲುವೆಗಾಗಿ 2001-02ರ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 4701-80-800-01 ಅಡಿಯಲ್ಲಿ ರೂ.50 ಲಕ್ಷಗಳ ಅನುದಾನ ಒದಗಿಸಲಾಗಿತ್ತು.

ಆ) ಪ್ರಸ್ತಾವಿತ ಬೈಪಾಸ್ ಕಾಲುವೆ ಪ್ರಸ್ತಾವನೆ ಬಗ್ಗೆ ತಾಂತ್ರಿಕ ಸಲಹಾ ಸಮಿತಿಯು ದಿನಾಂಕ:23-06-01 ದಂದು ಸ್ಥಳ ಪರಿಶೀಲಿಸಿ ಲಿಂಕ್ ಕಾಲುವೆ ಅಗತ್ಯವಿರುವುದಿಲ್ಲವೆಂದು ಅಭಿಪ್ರಾಯಪಟ್ಟು ಇದರ ಬದಲು ಈಗಿರುವ ಕಾಲುವೆಯನ್ನು ಅಭಿವೃದ್ಧಿಪಡಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ. ಅದರಂತೆ ಮುಂದಿನ ಕ್ರಮ ತೆಗೆದುಕೊಳ್ಳಲಾಗುತ್ತದೆ.

ಇ) ಉದ್ಭವಿಸುವುದಿಲ್ಲ.

ತುಂಗಾ ಎಡದಂಡೆ ನಾಲಾ ದುರಸ್ತಿಗಾಗಿ ಅನುದಾನ ಬಿಡುಗಡೆ

1380 (1674) ಶ್ರೀ ಚಂದ್ರಶೇಖರ್ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಂಗಾ ಎಡದಂತೆ ನಾಲೆಯನ್ನು ತುರ್ತು ದುರಸ್ತಿಗಾಗಿ ಅಗತ್ಯತೆಯ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಸದರಿ ದುರಸ್ತಿಗೆ ಅಗತ್ಯ ಇರುವ ಹಣ ಎಷ್ಟು;

ಇ) ಈ ದುರಸ್ತಿಗೆ ಸರ್ಕಾರದಿಂದ ಈಗಾಗಲೇ ಬಿಡುಗಡೆ ಮಾಡಿರುವ ಅನುದಾನ ಎಷ್ಟು;

ಈ) ಉಳಿದ ಅನುದಾನವನ್ನು ಯಾವಾಗ ಬಿಡುಗಡೆ ಮಾಡಾಲಾಗುವುದು? (ವಿವರ ಒದಗಿಸುವುದು)

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು):

ಅ) ಹೌದು. ಸರ್ಕಾರದ ಗಮನಕ್ಕೆ ಬಂದಿದೆ.

ಆ) ದುರಸ್ತಿ ಕೆಲಸಗಳ ಅಂದಾಜು ತಯಾರಿಕೆ ಅಂತಿಮ ಹಂತದಲ್ಲಿದೆ.

ಇ) ದುರಸ್ತಿಯ ಕೆಲಸಗಳ ತೀವ್ರತೆಯನ್ನು ಗಮನದಲ್ಲಿಟ್ಟುಕೊಂಡು ಪ್ರಸಕ್ತ ಸಾಲಿನಲ್ಲಿ 25-00 ಲಕ್ಷ ಅನುದಾನ ಒದಗಿಸಲಾಗಿದೆ.

ಈ) ಉದ್ಭವಿಸುವುದಿಲ್ಲ.

ಶಿವಮೊಗ್ಗ ಕ್ಷೇತ್ರದಲ್ಲಿ ಒಣ ಭೂಮಿ ಅಭಿವೃದ್ಧಿ

1381 (1675) ಶ್ರೀ ಹೆಚ್.ಎಂ.ಚಂದ್ರಶೇಖರಪ್ಪ: ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ 3 ವರ್ಷಗಳಲ್ಲಿ ಎಷ್ಟು ಒಣ ಭೂಮಿಯನ್ನು ಅಭಿವೃದ್ಧಿಗಾಗಿ ಆಯ್ಕೆ ಮಾಡಿಕೊಳ್ಳಲಾಗಿದೆ; ಈ ಪೈಕಿ ಎಷ್ಟು ಒಣ ಭೂಮಿಯನ್ನು ಅಭಿವೃದ್ಧಿ ಪಡಿಸಲಾಗಿದೆ; ಈ ಕಾರ್ಯಕ್ರಮಕ್ಕೆ ಬಿಡುಗಡೆಯಾದ ಅನುದಾನ ಎಷ್ಟು; ಖರ್ಚಾದ ಅನುದಾನ ಎಷ್ಟು; (ವಿವರ ಒದಗಿಸುವುದು)

ಆ) ಶಿವಮೊಗ್ಗ ವಿಧಾನ ಕ್ಷೇತ್ರ ವ್ಯಾಪ್ತಿಯಲ್ಲಿ ಕೃಷಿ ಇಲಾಖೆ ವತಿಯಿಂದ ವಿಶೇಷ ಘಟಕ ಹಾಗೂ ಇನ್ನಿತರೇ ಯೋಜನೆಯಡಿಯಲ್ಲಿ ರೈತರಿಗೆ ವಿತರಿಸಲಾಗಿರುವ ಕೃಷಿ ಸಲಕರಣೆಗಳ ಮೌಲ್ಯ ಎಷ್ಟು? (ವಿವರ ಒದಗಿಸುವುದು)

ಶ್ರೀ ವಿ.ಎಸ್.ಪಾಟೀಲ್ (ಕೃಷಿ ಸಚಿವರು):

ಅ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕೇವಲ 4599 ಹೆಕ್ಟೇರ್ ಮಾತ್ರ ಒಣಭೂಮಿ ಪ್ರದೇಶವಿದ್ದು, ಇದನ್ನು ಅಭಿವೃದ್ಧಿಪಡಿಸಲು ಯಾವುದೇ ಯೋಜನೆಗಳಿರುವುದಿಲ್ಲ. ಆದರೂ ಸಹ ಕಳೆದೆರಡು ಸಾಲಿನಲ್ಲಿ 1.84 ಲಕ್ಷ ರೂಪಾಯಿಗಳ ವೆಚ್ಚದಲ್ಲಿ 10.5 ಹೆಕ್ಟೇರ್‌ಗಳಷ್ಟು ಅಚ್ಚುಕಟ್ಟು ಪ್ರದೇಶವನ್ನು ಅಭಿವೃದ್ಧಿ ಪಡಿಸಲಾಗಿದೆ.

ಆ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳು ಅವಧಿಯಲ್ಲಿ ವಿಶೇಷ ಘಟಕ ಯೋಜನೆ, ಗಿರಿಜನ ಉಪ ಯೋಜನೆ ಹಾಗೂ ಇನ್ನಿತರೇ ಯೋಜನೆಗಳಲ್ಲಿ ಒಟ್ಟು 13,37,463-00 ರೂಪಾಯಿಗಳ ಮೌಲ್ಯದ ಕೃಷಿ ಸಲಕರಣೆಗಳನ್ನು ವಿತರಿಸಲಾಗಿದ್ದು, ಇವುಗಳ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.